# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (679) 595 |
| ಮಾನ್ಯ ಸದಸ್ಯರ ಹೆಸರು | : | ಐವನ್ ಡಿ 'ಸೋಜಾ |
| ಉತ್ತರಿಸುವ ದಿನಾಂಕ | : | 12-12-2025 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಒಟ್ಟು ವಸತಿ ನಿಲಯಗಳ ಸಂಖ್ಯೆ ಎಷ್ಟು: ಅವುಗಳಲ್ಲಿ 2024-25ರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ: (ವಿವರ ನೀಡುವುದು):</td><td>
ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1938 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರಸಂ</th><th>ವಿವರ</th><th>ಬಾಲಕ</th><th>ಬಾಲಕಿ</th><th>ಒಟ್ಟು</th></tr>
<tr><td>1</td><td>ಮೆಟ್ರಿಕ್ ಪೂರ್ವ ವಿ. ನಿಲಯಗಳು</td><td>917</td><td>298</td><td>1215</td></tr>
<tr><td>2</td><td>ಮೆಟ್ರಿಕ್ ನಂತರ ವಿ.ನಿಲಯಗಳು</td><td>419</td><td>300</td><td>719</td></tr>
<tr><td>3</td><td>ದೀನದಯಾಳ್ ಉಪಾದ್ಯಾಯ ವಿ ನಿಲಯಗಳು</td><td>2</td><td>2</td><td>4</td></tr>
<tr><td></td><td>ಒಟ್ಟು :-</td><td>1338</td><td>600</td><td>1938</td></tr>
</table>
2024-25ನೇ ಸಾಲಿಗೆ ಪ್ರವೇಶಾವಕಾಶ ಕಲ್ಪಿಸಲಾದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವಿವರ</th><th>ದಾಖಲಾತಿ</th></tr>
<tr><td>01</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ</td><td>101475</td></tr>
<tr><td>02</td><td>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ</td><td>118699</td></tr>
<tr><td>03</td><td>ದೀನದಯಾಳ್ ಉಪಾದ್ಯಾಯ ವಿದ್ಯಾರ್ಥಿ ನಿಲಯಗಳು</td><td>400</td></tr>
<tr><td></td><td>ಒಟ್ಟು :</td><td>220574</td></tr>
</table>
ಸದರಿ ವಿದ್ಯಾರ್ಥಿನಿಲಯಗಳ ಪೈಕಿ ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಿರ್ವಹಿಸಲಾಗುತ್ತಿರುವ ವಿದ್ಯಾರ್ಥಿ ನಿಲಯಗಳ ವಿವರ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವಿವರ</th><th>ಸ್ವಂತ ಕಟ್ಟಡ</th><th>ಬಾಡಿಗೆ ಕಟ್ಟಡ</th></tr>
<tr><td>01</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ</td><td>1134</td><td>81</td></tr>
<tr><td>02</td><td>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ</td><td>535</td><td>188</td></tr>
<tr><td></td><td>ಒಟ್ಟು :</td><td>1669</td><td>269</td></tr>
</table>
</td></tr>
</table>

| | | |
|---|---|---|
| ಆ) | ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡವನ್ನು ಹೊಂದಿವೆ: ಎಷ್ಟು ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿವೆ: (ವಿವರ ನೀಡುವುದು): | ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಒಟ್ಟು 1938 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳನ್ನು ನಡೆಸುತ್ತಿದ್ದು, 1669 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಮತ್ತು 269 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುತ್ತವೆ. |
| ಇ) | ದಕ್ಷಿಣ ಕನ್ನಡ ಜಿಲ್ಲೆಗೆ ವಿವಿಧ ಜಿಲ್ಲೆಗಳಿಂದ ಆಗಮಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದು, ಹೆಚ್ಚುವರಿ ವಸತಿ ನಿಲಯಗಳ ಬೇಡಿಕೆ ಇದ್ದು, ಇದನ್ನು ಸರ್ಕಾರ ಪರಿಗಣಿಸುವುದೇ: (ವಿವರ ನೀಡುವುದು); | ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.<br><br>ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುತ್ತಿದ್ದು, ಸರ್ಕಾರದ ಸುತ್ತೋಲೆಯನ್ನು ಪಾಲಿಸುವ ನಿಟ್ಟಿನಲ್ಲಿ ವಿದ್ಯಾರ್ಥಿ ನಿಲಯಗಳ ಕಟ್ಟಡದ ಗರಿಷ್ಟ ಸಾಮರ್ಥ್ಯನುಸಾರ ಪ್ರವೇಶಾವಕಾಶ ಕಲ್ಪಿಸುವುದರ ಜೊತೆಗೆ ಹೆಚ್ಚುವರಿಯಾಗಿ ಬಾಡಿಗೆ ಕಟ್ಟಡಗಳನ್ನು ಪಡೆದು ಅರ್ಜಿ ಸಲ್ಲಿಸುತ್ತಿರುವ ಎಲ್ಲಾ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.<br><br>ಹೊಸದಾಗಿ ವಿದ್ಯಾರ್ಥಿನಿಲಯಗಳ ಮಂಜೂರಾತಿಗಾಗಿ ನಿಗಧಿತ ನಮೂನೆಗಳಲ್ಲಿ ಜಿಲ್ಲೆಯ ಸಕ್ಷಮ ಪ್ರಾಧಿಕಾರಿಗಳಾದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಮುಖಾಂತರ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ನಿಯಮಾನುಸಾರ ಮಂಜೂರು ಮಾಡಲು ಕ್ರಮಕೈಗೊಳ್ಳಲಾಗುವುದು. |
| ಈ) | ಇಲಾಖೆಯಿಂದ ನಡೆಸುತ್ತಿರುವ ವಸತಿ ನಿಲಯಗಳಲ್ಲಿ ವಿವಿಧ ಹಂತಗಳ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು): | ಬಂದಿದೆ.<br><br>ಇಲಾಖಾ ವ್ಯಾಪ್ತಿಯಲ್ಲಿನ ಮೆಟ್ರಿಕ್ ಪೂರ್ವ/ ನಂತರದ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗಾಗಿ ಗ್ರೂಪ್ ಸಿ ವೃಂದದ ಸೀನಿಯರ್ ವಾರ್ಡನ್/ ವಾರ್ಡನ್ ಹಾಗೂ ಗ್ರೂಪ್-ಡಿ ವೃಂದದ ಹುದ್ದೆಗಳ ಮಂಜೂರಾತಿ, ಭರ್ತಿ ಹಾಗೂ ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತದೆ. |

| ಕ್ರ. ಸಂ | ಹುದ್ದೆಯ ಹೆಸರು | ಮಂಜೂರಾತಿ | ಭರ್ತಿ | ಖಾಲಿ |
|---|---|---|---|---|
| 1 | ಸೀನಿಯರ್ ವಾರ್ಡನ್ (ಪುರುಷ & ಮಹಿಳೆ) | 61 | 61 | 0 |
| 2 | ವಾರ್ಡನ್ (ಪುರುಷ) | 1282 | 770 | 512 |
| 3 | ವಾರ್ಡನ್ (ಮಹಿಳೆ) | 549 | 458 | 91 |
| 4 | ಅಡುಗೆಯವರು | 4085 | 1929 | 2156 |
| 5 | ಅಡುಗೆ ಸಹಾಯಕರು | 2883 | 154 | 2729 |
| 6 | ಕಾವಲುಗಾರರು | 1968 | 140 | 1828 |

---3

| | | |
|---|---|---|
| | | ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ವಾರ್ಡನ್ ಹುದ್ದೆಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 232 ವಾರ್ಡನ್ ಹುದ್ದೆಗೆ ಭರ್ತಿ ಕುರಿತು ಆರ್ಥಿಕ ಇಲಾಖೆ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಿದ್ದು, ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದೆ.<br><br>ಮುಂದುವರೆದು KPSC ಅಧಿಸೂಚನೆ ದಿನಾಂಕ: 08.07.2025ರಲ್ಲಿ ಹೆಚ್ಚುವರಿ ಆಯ್ಕೆಪಟ್ಟಿ ಆಯುಕ್ತಾಲಕ್ಕೆ ಕಳುಹಿಸಿಕೊಟ್ಟಿದ್ದು, ನೇಮಕಾತಿ ಆದೇಶ ನೀಡುವ ಪೂರ್ವದಲ್ಲಿ ಸಿಂಧುತ್ವ, ಪೊಲೀಸ್ ವರದಿ, ವೈದ್ಯಕೀಯ ವರದಿ, ಶೈಕ್ಷಣಿಕ ಅಂಕಪಟ್ಟಿಗಳ ನೈಜತಾ ವರದಿ ಇತ್ಯಾದಿಗಳನ್ನು ಪಡೆಯಲು ಕ್ರಮವಹಿಸಲಾಗಿರುತ್ತದೆ. ಸದರಿ ದಾಖಲೆಗಳನ್ನು ಸ್ವೀಕೃತಗೊಂಡ ಕೂಡಲೇ ಶೀಘ್ರವಾಗಿ ನೇಮಕಾತಿ ಆದೇಶ ಹೊರಡಿಸಲಾಗುವುದು. ಮುಂಬಡ್ತಿ ಕೋಟಾದಡಿ ಖಾಲಿ ಇರುವ 255 ಹುದ್ದೆಗಳಿಗೆ ಸಂಬಂಧಿಸಿದಂತೆ ಸಿ & ಆರ್ ನಿಯಮಗಳನ್ವಯ ಅರ್ಹತೆ ಪೂರೈಸಿದ ನೌಕರಗಳಿಗೆ ನಿಯಮಾನುಸಾರ ಮುಂಬಡ್ತಿ ಮುಖೇನ ಭರ್ತಿ ಮಾಡಲು ಕ್ರಮವಹಿಸಲಾಗುವುದು.<br><br>ಪ್ರಸ್ತುತ ಖಾಲಿ ಇರುವ ವಾರ್ಡನ್ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಲಯಗಳ ಸಮೀಪದ ವಾರ್ಡನ್ ಗಳನ್ನು ಹೆಚ್ಚುವರಿ ಪ್ರಭಾರದಲ್ಲಿ ಇರಿಸುವ ಮೂಲಕ ಸುಗಮ ನಿರ್ವಹಣೆಗೆ ಕ್ರಮವಹಿಸಲಾಗಿದೆ ಮತ್ತು ಗ್ರೂಪ್ –ಡಿ ವೃಂದದಲ್ಲಿ ಖಾಲಿ ಇರುವ ಅಡುಗೆಯವರು/ಅಡುಗೆ ಸಹಾಯಕರು/ಕಾವಲುಗಾರರು ಹುದ್ದೆಗಳಿಗೆ ಎದುರಾಗಿ ನಿಲಯಗಳ ಸುಸೂತ್ರ ನಿರ್ವಹಣೆಗಾಗಿ ಹೊರಸಂಪನ್ಮೂಲ ಮುಖೇನ ಸಿಬ್ಬಂದಿ ಸೇವೆ ಪಡೆಯಲಾಗುತ್ತಿದೆ. |

**ಸಕಇ 946 ಪಕವಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**